ಬ್ರಹ್ಮಾವರ ಕ್ಷೇತ್ರಕ್ಕೆ ಸೇರಿದ ಸಾಲಿಗ್ರಾಮ ಪಟ್ಟಣ ಪಂಚಾಯತ್‌ನ ಅನುದಾನ

1904 (1681) ಶ್ರೀ ಜಯಪ್ರಕಾಶ್ ಹೆಗ್ಡೆ ಕೆ. (ಬ್ರಹ್ಮಾವರ): ಮಾನ್ಯ ಪೌರಾಡಳಿತ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ. ಬ್ರಹ್ಮಾವರ ವಿಧಾನಸಭಾ ಕ್ಷೇತ್ರಕ್ಕೆ ಸೇರಿದ ಸಾಲಿಗ್ರಾಮ ಪಟ್ಟಣ ಪಂಚಾಯತಿಗೆ 2002-2003ನೇ ಸಾಲಿನಲ್ಲಿ ನೀಡಲಾದ ಅನುದಾನವೆಷ್ಟು?

ಆ. ಸಾಲಿಗ್ರಾಮ ಪಟ್ಟಣ ಪಂಚಾಯತ್ ಅಭಿವೃದ್ಧಿಗೆ ಅಗತ್ಯ ವಿರುವ ಅನುದಾನವೆಷ್ಟು?

ಇ. ಈ ಪಟ್ಟಣ ಪಂಚಾಯತ್‌ನ ಒಟ್ಟು ವಾರ್ಷಿಕ ಆದಾಯವೆಷ್ಟು?

ಈ. ಈ ಪಟ್ಟಣ ಪಂಚಾಯತ್ ಅಭಿವೃದ್ಧಿಗೆ ವಿಶೇಷ ಅನುದಾನ ಬಿಡುಗಡೆ ಮಾಡಲಾಗುತ್ತಿದೆಯೇ?

ಶ್ರೀ ಎಸ್. ಕುಮಾರ್ ಬಂಗಾರಪ್ಪ (ಪೌರಾಡಳಿತ ರಾಜ್ಯ ಸಚಿವರು)

ಅ. 2002-2003ನೇ ಸಾಲಿಗೆ (ಜನವರಿ ಅಂತ್ಯದವರೆಗೆ) ಒಟ್ಟು ರೂ.6.83 ಲಕ್ಷ ನೀಡಲಾಗಿದೆ.

ಆ. ರೂ. 67.00 ಲಕ್ಷಗಳು

ಇ. ರೂ. 10.00 ಲಕ್ಷಗಳು

ಈ. 2002-2003ನೇ ಸಾಲಿನಲ್ಲಿ ಅಭಿವೃದ್ಧಿಗೆ ವಿಶೇಷ ಅನುದಾನ ಬಿಡುಗಡೆ ಮಾಡಿರುವುದಿಲ್ಲ.

ಬೆಂಗಳೂರಿನಲ್ಲಿ ಖಾಸಗಿ ಬಸ್‌ಗಳಿಗಾಗಿ ನಿಲ್ದಾಣ ನಿರ್ಮಿಸುವುದು

1907 (75) ಶ್ರೀ ಕಟ್ಟಾ ಸುಬ್ರಮಣ್ಯ ನಾಯ್ಡು (ಶಿವಾಜಿನಗರ): ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ. ಬೆಂಗಳೂರಿನಲ್ಲಿ ಪ್ರತಿದಿನ ರಾಜ್ಯದ ಹಾಗೂ ಇತರ ರಾಜ್ಯಗಳಿಗೆ ಹೋಗತಕ್ಕ ಖಾಸಗಿ ಟೂರಿಸ್ಟ್ ಬಸ್‌ಗಳ ಸಂಖ್ಯೆ ಎಷ್ಟು;

ಆ. ಇವುಗಳಲ್ಲಿ ಪ್ರತಿದಿನ ಪ್ರಯಾಣಿಸುವ ಪ್ರಯಾಣಿಕರ ಸಂಖ್ಯೆ ಎಷ್ಟು;

ಇ. ಈ ಟೂರಿಸ್ಟ್ ಬಸ್‌ಗಳಿಗೆ ನಿರ್ದಿಷ್ಟವಾದ ಬಸ್‌ನಿಲ್ದಾಣ ಇಲ್ಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ. ಪ್ರಯಾಣಿಕರಿಗೆ ಇದರಿಂದ ಆಗುತ್ತಿರುವ ತೊಂದರೆಯನ್ನು ತಪ್ಪಿಸಲು ಬೆಂಗಳೂರು ನಗರದಲ್ಲಿ ಈ ಬಸ್‌ಗಳಿಗಾಗಿ ಪ್ರತ್ಯೇಕವಾಗಿ ಬಸ್‌ನಿಲ್ದಾಣವನ್ನು ನಿರ್ಮಿಸಲು ಉದ್ದೇಶಿಸಲಾಗಿದೆಯೇ?

ಶ್ರೀ ಟಿ. ರಮಾನಾಥ ರೈ (ಸಾರಿಗೆ ಸಚಿವರು)

ಅ. ಸುಮಾರು 1800 ಟೂರಿಸ್ಟ್ ಬಸ್‌ಗಳು ಬೆಂಗಳೂರಿನಿಂದ ಪ್ರತಿದಿನ ರಾಜ್ಯದ ವಿವಿಧ ಸ್ಥಳಗಳಿಗೆ ಹಾಗೂ ಇತರ ರಾಜ್ಯಗಳಿಗೆ ಸಂಚರಿಸುತ್ತಿವೆ.

ಆ. ಈ ಬಸ್ಸುಗಳಲ್ಲಿ ಪ್ರತಿದಿನ ಸುಮಾರು 50 ರಿಂದ 54 ಸಾವಿರ ಜನರು ಪ್ರಯಾಣಿಸುತ್ತಾರೆ.

ಇ. ಹೌದು.

ಈ. ಪ್ರವಾಸಿ ಬಸ್ಸುಗಳಿಗಾಗಿ ಪ್ರತ್ಯೇಕ ಬಸ್ ನಿಲ್ದಾಣ ನಿರ್ಮಿಸುವ ವಿಷಯವನ್ನು ಪರಿಗಣಿಸಲಾಗುವುದು.